ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 16/12/20

# ಕಸ್ತೂರಿ ರಂಗನ್ ವರದಿ: ವಿಶೇಷ ಅಧಿವೇಶನಕ್ಕೆ ಆಗ್ರಹ

ಚಿಕ್ಕಮಗಳೂರು: ಕಸ್ತೂರಿ ರಂಗನ್ ವರದಿ ಬಗ್ಗೆ ರಾಜ್ಯ ಸರ್ಕಾರ ಚರ್ಚಿಸಿ, ಸುಪ್ರೀಂ ಕೋರ್ಟ್‌ನಲ್ಲಿ ಪ್ರಮಾಣಪತ್ರ ಸಲ್ಲಿಸಲು ಕೂಡಲೇ ವಿಶೇಷ ಅಧಿವೇಶನ ಕರೆಯಬೇಕು ಎಂದು ಕಸ್ತೂರಿ ರಂಗನ್ ವರದಿ ವಿರೋಧಿ ಹೋರಾಟ ಸಮಿತಿ ರಾಜ್ಯ ಸರ್ಕಾರವನ್ನು ಒತ್ತಾಯಿಸಿದೆ.

ಈ ಸಂಬಂಧ ಮಂಗಳವಾರ ಇಲ್ಲಿನ ತಾಲೂಕು ಕಚೇರಿಯಿಂದ ಆಜಾದ್ ಪಾರ್ಕ್ ವೃತ್ತದವರೆಗೆ ಪ್ರತಿಭಟನಾ ಮೆರವಣಿಗೆ ಹಾಗೂ ಬಹಿರಂಗ ಸಭೆ ನಡೆಯಿತು. ಪಶ್ಚಿಮಘಟ್ಟ ಪ್ರದೇಶದಲ್ಲಿರುವ ರಾಜ್ಯದ ಸುಮಾರು 10 ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಸ್ತೂರಿ ರಂಗನ್ ವರದಿ ಜಾರಿಯಾಗಲಿದೆ. ಇದು, ಯಥಾವತ್ತಾಗಿ ಕಾರ್ಯರೂಪಕ್ಕೆ ಬಂದರೆ ಚಿಕ್ಕಮಗಳೂರು ಜಿಲ್ಲೆಯ 146 ಗ್ರಾಮಗಳು ಅತಂತ್ರವಾಗಲಿವೆ. ಈ ಆತಂಕ ಮಲೆನಾಡಿನಲ್ಲಿ ಮನೆ ಮಾಡಿದೆ. ಕರ್ನಾಟಕ ಸರ್ಕಾರ ಸುಪ್ರೀಂ ಕೋರ್ಟ್‌ನಲ್ಲಿ ಕೆಲವು ಪ್ರದೇಶಗಳನ್ನು ಕೈಬಿಡಲು ಕೋರಿಕೆಯ ಪ್ರಮಾಣಪತ್ರ ಸಲ್ಲಿಸಬೇಕೆಂದು ಸಭೆಯಲ್ಲಿ ಮನವಿ ಮಾಡಿದರು.

# ಕಸ್ತೂರಿ ರಂಗನ್ ವರದಿ ಜಾರಿ ವಿರೋಧಿಸಿ 28 ನಾಮಪತ್ರ ವಾಪಸ್

ಸಕಲೇಶಪುರ: ಕಸ್ತೂರಿ ರಂಗನ್ ವರದಿ ಜಾರಿ ವಿರೋಧಿಸಿ ತಾಲೂಕಿನ ದೇವಾಲದಕೆರೆ ಗ್ರಾಪಂ ವ್ಯಾಪ್ತಿಯ 5 ಕ್ಷೇತ್ರಗಳ 8 ಸ್ಥಾನಗಳಿಗೆ ಸಲ್ಲಿಕೆಯಾಗಿದ್ದ 29 ನಾಮಪತ್ರಗಳಲ್ಲಿ 28 ನಾಮಪತ್ರಗಳನ್ನು ಹಿಂಪಡೆಯಲಾಗಿದೆ. ದಾಕ್ಷಾಯಿಣಿ ಎಂಬ ಮಹಿಳಾ ಅಭ್ಯರ್ಥಿಯೊಬ್ಬರು ಮಂಗಳವಾರ ಹೊರ ಊರಿಗೆ ಹೋಗಿದ್ದರಿಂದ ನಾಮಪತ್ರ ಹಿಂಪಡೆಯಲಾಗದೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಒಂದೆರಡು ದಿನಗಳಲ್ಲಿ ಗ್ರಾಮಸ್ಥರು ಆಕೆಯಿಂದಲೂ ರಾಜೀನಾಮೆ ಕೊಡಿಸುವ ಸಾಧ್ಯತೆಯಿದೆ.